



ಅರುಣ ಪಿ. ಭಟ್ಟ

## ವಾರಭವಿಷ್ಯ 10.12.2020ರಿಂದ 16.12.2020ರವರೆಗೆ




ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ವೆಚ್ಚ ಏರಿದರೂ ಆದಾಯದಲ್ಲಿನ ಹೆಚ್ಚಳ ಖರ್ಚುಗಳನ್ನು ಸರಿದೂಗಿಸುತ್ತದೆ. ನಿಮ್ಮ ಅಭಿಪ್ರಾಯಗಳನ್ನು ಇತರರ ಮೇಲೆ ಹೇರಬೇಡಿ. ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ನಿಕಟ ಸಹಕಾರದೊಂದಿಗೆ ಕೆಲಸ ಮಾಡಬೇಕು. ನಿಮ್ಮ ಸ್ಪರ್ಧಾತ್ಮಕ ಸ್ವಭಾವ ನೀವು ಸದಾ ಮುಂದೆ ಉಳಿಯಲು ಸಹಾಯ ಮಾಡುತ್ತದೆ. ಶುಭದಿನ 14. ಶ್ರೀ ದುರ್ಗಾ ಆರಾಧನೆ ಮಾಡಿರಿ.




ವಾರದ ಶುರುವಿನಿಂದಲೇ ವೃತ್ತಿಪರ ಜೀವನದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ಮಕ್ಕಳಿಗೆ ಸಹಾಯ ಮಾಡಲಿದ್ದೀರಿ. ಕುಟುಂಬದಲ್ಲಿ ಹಲವು ಬದಲಾವಣೆ ತರುವ ಮೂಲಕ ಸಂತೋಷ ಉಂಟು ಮಾಡಲಿದ್ದೀರಿ. ಉದ್ಯೋಗ ಸ್ಥಳದಲ್ಲಿ ಹೆಚ್ಚು ತಾಳ್ಮೆಯಿಂದ ಹಾಗೂ ಗಮನ ಕೊಟ್ಟು ಕೆಲಸ ಮಾಡಿ. ಇಲ್ಲದಿದ್ದರೆ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಶುಭದಿನ 12. ಹನುಮಾನ್ ಚಾಲೀಸ್ ಓದಿರಿ.




ದಾನದಕ್ತಿ ಮೂಡುತ್ತದೆ. ಅದಕ್ಕೆ ನಿಮ್ಮ ಕುಟುಂಬದ ಬೆಂಬಲವೂ ದೊರೆಯುತ್ತದೆ. ನಿಮ್ಮ ತಾಯಿಯವರ ಅನಾರೋಗ್ಯ ಆತಂಕಕ್ಕೆ ಗುರಿ ಮಾಡಬಹುದು. ಆದಾಯ ಮೂಲಗಳಿಂದ ಉತ್ತಮ ವರಮಾನ ಇರುತ್ತದೆ. ಇದರಿಂದ ನಿಮ್ಮ ಆತ್ಮವಿಶ್ವಾಸ ಹೆಚ್ಚಾಗುತ್ತದೆ ಸಂತೋಷ ಕೂಡ ಉಂಟಾಗುತ್ತದೆ. ನಿಮ್ಮ ಜೀವನಶೈಲಿ ಮತ್ತಷ್ಟು ಉತ್ತಮಗೊಳ್ಳುತ್ತದೆ. ಶುಭದಿನ 13. ಗಣಪತಿಗೆ 108 ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸರಿಯಾದ ದಿಕ್ಕಿನಲ್ಲಿ ಬಳಕೆ ಮಾಡಿಕೊಳ್ಳುತ್ತೀರಿ. ಇದರಿಂದ ಮುಂಬರುವ ದಿನಗಳಲ್ಲಿ ಅನುಕೂಲ ಆಗುತ್ತದೆ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಕುಟುಂಬದ ಸದಸ್ಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಕುಟುಂಬದ ಸದಸ್ಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ವಾರದ ಕೊನೆ ಭಾಗದಲ್ಲಿ ಕೆಲಸದಲ್ಲಿ ಪ್ರಗತಿ ಇದೆ. ಶುಭದಿನ 14. ವಿಷ್ಣು ಸಹಸ್ರನಾಮ ಓದಿರಿ.




ವಾರದ ಮೊದಲ ಭಾಗದಲ್ಲಿ ದೂರದ ಪ್ರದೇಶಗಳಿಗೆ ತೆರಳುವ ಸಂಭವ. ವ್ಯಾಜ್ಯಗಳು ಕೋರ್ಟ್‌ನಲ್ಲಿ ಇದ್ದರೆ ಅವುಗಳನ್ನು ನಿವಾರಿಸಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚು ಶ್ರಮ ಪಡಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಆಲೋಚನೆ ಮಾಡುತ್ತೀರಿ. ಈ ಮಧ್ಯೆ ನಿಮ್ಮ ವೈಯಕ್ತಿಕ ಸಂಬಂಧದಲ್ಲಿ ಕೆಲ ಗೊಂದಲ ಏರ್ಪಡುತ್ತದೆ. ಶುಭದಿನ 16 ಕಾಲಭೈರವನ ಸೇವೆ ಮಾಡಿರಿ.




ಉದ್ಯೋಗದಲ್ಲಿ ಒತ್ತಡ ಹೆಚ್ಚಾಗುವ ಸಾಧ್ಯತೆಯಿದೆ. ನೋವಿನಂಥ ಸಮಸ್ಯೆಗಳು ಕಾಡಬಹುದು. ಕುಟುಂಬದಲ್ಲಿ ತೆಗೆದುಕೊಳ್ಳಬೇಕಾದ ನಿರ್ಧಾರಕ್ಕೆ ಪೂರಕವಾಗಿ ಹಲವು ಅವಕಾಶಗಳು ದೊರೆಯಲಿವೆ. ಭೂಮಿ ಖರೀದಿಗೆ ಮನಸ್ಸು ಮಾಡುತ್ತೀರಿ. ಆತುರದಿಂದ ಕೆಲವು ನಿಮ್ಮ ಶ್ರಮದ ಹಣವು ಇನ್ನೊಬ್ಬರ ಕೈನಲ್ಲಿ ಸಿಲುಕಿಕೊಳ್ಳುತ್ತದೆ. ಶುಭದಿನ 15. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ 18 ಸಾರೆ ಪಠಣ ಮಾಡಿರಿ.




ವೃತ್ತಿಪರ ಜೀವನದಲ್ಲಿ ಉತ್ತಮವಾದ ಅವಕಾಶಗಳು ದೊರೆಯಲಿವೆ. ಕೌಟುಂಬಿಕ ವಿಷಯಗಳಲ್ಲಿ ಪ್ರಗತಿ. ವ್ಯಾಪಾರ ವ್ಯವಹಾರಗಳಲ್ಲಿ ಪ್ರಗತಿ ಕಾಣಿಸುತ್ತದೆ. ನಿಮ್ಮ ಆರೋಗ್ಯ ಕೂಡ ಉತ್ತಮವಾಗಿರುತ್ತದೆ. ಮಕ್ಕಳ ಪ್ರಗತಿ ನಿಧಾನ ಆಗುವುದರಿಂದ ಚಿಂತೆಗೆ ಕಾರಣವಾಗುತ್ತದೆ. ಕೆಲ ನಿರ್ದಿಷ್ಟ ಕೆಲಸಗಳನ್ನು ಪೂರೈಸಲು ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ಶುಭದಿನ 11. ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.




ಉದ್ಯೋಗಸ್ಥರು ನಿಮಗೆ ವಹಿಸಿದ ಕೆಲಸಗಳನ್ನು ಪೂರೈಸಲು ಯಶಸ್ವಿ ಆಗುತ್ತೀರಿ. ನಿಮ್ಮ ಸಿಬ್ಬಂದಿಯ ಆತ್ಮಸ್ಥೈರ್ಯ ಹೆಚ್ಚಿಸುವಲ್ಲಿ ಸಫಲರಾಗುತ್ತೀರಿ. ಪ್ರೋತ್ಸಾಹ ನೀಡುತ್ತೀರಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ನೀಡಿದ ಸಂದರ್ಶನಗಳು ಯಶಸ್ಸು ಕಾಣುವ ಸಾಧ್ಯತೆಗಳಿವೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯ ಭಾವನೆಗಳಿಗೂ ಗೌರವ ನೀಡಿ. ಶುಭದಿನ 16. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಹಣಕಾಸು ಹೂಡಿಕೆಯಲ್ಲಿ ಪ್ರಗತಿ ಕಾಣಲಿದ್ದೀರಿ. ಬಾಹ್ಯ ಚಟುವಟಿಕೆಗಳು ಈ ಹಿಂದಿನಂತೆಯೇ ನಡೆಯುತ್ತವೆ. ತಲೆನೋವು, ಕಣ್ಣಿಗೆ ಸಂಬಂಧಿಸಿದ ತೊಂದರೆ ಹಾಗೂ ಹಲ್ಲು ನೋವು ಕಾಡಬಹುದು. ಈ ಸಮಸ್ಯೆಗಳ ಪರಿಹಾರಕ್ಕೆ ವಿವೇಚನೆ ಬಹಳ ಮುಖ್ಯವಾಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯಿಂದ ಕೆಲ ಗೊಂದಲ, ಆತಂಕ ಸೃಷ್ಟಿ ಆಗುತ್ತದೆ. ಶುಭದಿನ 12. ಈಶ್ವರನಿಗೆ ರುದ್ರಾಭಿಶೇಕ ಮಾಡಿಸಿ.




ವಾರದ ಶುರುವಿನಿಂದಲೇ ನಿಮ್ಮ ಅದೃಷ್ಟ ಚೆನ್ನಾಗಿದೆ. ನಿಮ್ಮ ಕೆಲಸಗಳನ್ನು ಪೂರ್ಣಗೊಳಿಸಲು ಹೆಚ್ಚು ಚಟುವಟಿಕೆಯಿಂದ ಕಾಣಿಸಿಕೊಳ್ಳುತ್ತಿರಿ. ಕಟ್ಟಡ ವಾಹನಗಳ ನಿರ್ವಹಣೆಯು ನಿರಂತರ ಚಿಂತೆಗೆ ಕಾರಣವಾಗುತ್ತದೆ. ತಂದೆಯ ಜತೆಗೆ ಮನಸ್ತಾಪ ಉದ್ಭವಿಸಬಹುದು. ಈ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ವಾರಾಂತ್ಯಕ್ಕೆ ಹಣದ ಹರಿವು ಹೆಚ್ಚಾಗಲಿದೆ. ಶುಭದಿನ 15. ಮಾರುತಿ ಗುಡಿಗೆ ಮುಖ ನೋಡಿದ ಎಣ್ಣೆ ನೀಡಿರಿ.




ವ್ಯಾಪಾರ– ವ್ಯವಹಾರ ಮಾಡುತ್ತಿರುವವರು ಅದನ್ನು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗಲು ಯತ್ನಿಸುತ್ತೀರಿ. ನಿಮ್ಮ ಶ್ರಮಕ್ಕೆ ಯಶಸ್ಸು ದೊರೆಯುತ್ತದೆ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ. ವೈವಾಹಿಕ ಜೀವನವು ಸಂತೋಷವಾಗಿ ಇರುತ್ತದೆ.ಮನಸಿಗೆ ಸಂತೋಷ ನೀಡುವಂಥ ಗೃಹಾಲಂಕಾರ ವಸ್ತುಗಳ ಖರೀದಿಗೆ ಮುಂದಾಗುತ್ತೀರಿ. ಶುಭದಿನ 16. ಸುಬ್ರಹ್ಮಣ್ಯ ಜಪ ಮಾಡಿರಿ.




ನಿಮ್ಮ ಕೆಲಸ– ಕಾರ್ಯಗಳನ್ನು ಇನ್ನಷ್ಟು ಒಪ್ಪ– ಓರಣವಾಗಿ ಮಾಡಲು ಇನ್ನೂ ಹೆಚ್ಚಿನ ಶ್ರಮ ಹಾಕುತ್ತೀರಿ. ನಿಮ್ಮ ಮೇಲಧಿಕಾರಿಗಳು ಸೂಚನೆ ನೀಡಿ, ಕೆಲಸದ ವೇಗವನ್ನು ಮತ್ತಷ್ಟು ಹೆಚ್ಚಿಸಿಕೊಳ್ಳುವಂತೆ ಸೂಚನೆ ನೀಡುತ್ತಾರೆ. ಕೆಲವು ವ್ಯವಹಾರಗಳನ್ನು ಮಾಡುವಾಗ ಬಹಳ ಎಚ್ಚರಿಕೆಯಿಂದ ಇರಬೇಕಾಗುತ್ತದೆ. ಜತೆಗೆ ಸ್ವಚ್ಛತೆ ಕಡೆಗೆ ಹೆಚ್ಚಿನ ಗಮನ ನೀಡಬೇಕಾಗುತ್ತದೆ. ಶುಭದಿನ 14. ನವದುರ್ಗಾ ಆರಾಧನೆ ಮಾಡಿರಿ.